ಬಂದಿದೆಯೆ? ಕೊಠಡಿಗಳ ಕೊರತೆಯು ಇರುವುದರಿಂದ ಪಾಳಿ ಪದ್ಧತಿ ಇರುವುದು ನಿಜವೇ? (ವಿವರ ನೀಡುವುದು)

ಇ. ನಗರ ಬೆಳದಂತೆ ಅನೇಕ ಹೊಸ ಬಡಾವಣೆಗೆ ಹೊಸ ಪ್ರಾಥಮಿಕ ಶಾಲೆ ತೆರೆಯಲು ಏನು ಯೋಜನೆ ಹಾಕಿಕೊಳ್ಳಲಾಗಿದೆ? (ವಿವರ ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು. ಈ ವಲಯಗಳಲ್ಲಿ ಇರುವ ಶಾಲೆಗಳು ಹಾಗೂ ಶಾಲಾ ಮಕ್ಕಳ ಸಂಖ್ಯೆ ಹಾಗೂ ವಿಸ್ತೀರ್ಣವನ್ನು ಆಧರಿಸಿ ಶೈಕ್ಷಣಿಕ ಮತ್ತು ಆಡಳಿತ ಹಿತದೃಷ್ಟಿಯಿಂದ ವಲಯಗಳನ್ನು ಅಗತ್ಯಕ್ಕೆ ತಕ್ಕಂತೆ ರಚಿಸಲಾಗಿದೆ. ಒಂದೇ ವಲಯವಾಗಿ ರಚಿಸಿದ್ದಲ್ಲಿ, ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಅಡಚಣೆಗಳು ಉಂಟಾಗುತ್ತವೆ.

ಆ. ಬಂದಿದೆ. ಕೊಠಡಿಗಳ ಕೊರತೆ ಇರುವುದರಿಂದ ಹುಬ್ಬಳ್ಳಿಯಲ್ಲಿ 23 ಶಾಲೆಗಳು, ಧಾರವಾಡದಲ್ಲಿ 12 ಶಾಲೆಗಳು ಪಾಳಿ ಪದ್ಧತಿಯಲ್ಲಿ ನಡೆಯುತ್ತಿವೆ.

ಇ. ನಗರ ಬೆಳೆದಂತೆ ಅನೇಕ ಹೊಸ ಬಡಾವಣೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಹುಬ್ಬಳ್ಳಿ-ಧಾರವಾಡ ನಗರ ವಿಭಾಗದಲ್ಲಿ 12 ಹೊಸ ಪ್ರಾಥಮಿಕ ಶಾಲೆಯನ್ನು ಪ್ರಾರಂಭಿಸಲಾಗಿದೆ. ಅಗತ್ಯವಿರುವ ಕಡೆ ಶಾಲೆಗಳನ್ನು ಪ್ರಾರಂಭಿಸಲಾಗುವುದು.

ಧಾರವಾಡದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸುವುದು

2513 (3364) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಧಾರವಾಡ ನಗರದಲ್ಲಿ ಸರ್ಕಾರಿ ಪ್ರೌಢಶಾಲೆ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಧಾರವಾಡ ನಗರದಲ್ಲಿ ಎಲ್ಲಾ ಖಾಸಗಿ ಪ್ರೌಢಶಾಲೆಗಳು ಇರುವುದರಿಂದ ಡೊನೇಷನ್ ಹಾವಳಿ ಹೆಚ್ಚಿದ್ದು ಬಡ ಮಕ್ಕಳು ತೊಂದರೆ ಪಡುತ್ತಿರುವುದು ನಿಜವಲ್ಲವೇ?

ಇ) ಕಳೆದ ಸುಮಾರು ವರ್ಷಗಳಿಂದ ಪ್ರೌಢಶಾಲೆಗಳನ್ನು ಪ್ರಾರಂಭಿಸಿಲ್ಲದಿರುವುದು ಸರ್ಕಾರವು ಗಮನಿಸಿದೆಯೇ?

ಈ) ಹಾಗಿದ್ದಲ್ಲಿ ಈ ಕ್ಷೇತ್ರಕ್ಕೆ ಸರ್ಕಾರಿ ಪ್ರೌಢಶಾಲೆಗಳನ್ನು ತೆರೆಯಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಇಲ್ಲ. ಈ ಬಗ್ಗೆ ಯಾವುದೇ ದೂರು ಬಂದಿಲ್ಲ.

ಇ) ಹೌದು

ಈ) ಪರಿಶೀಲಿಸಲಾಗುವುದು.

ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಪುನರ್ವಸತಿ ಕೇಂದ್ರಗಳಲ್ಲಿ ಶಾಲೆಗಳ ಪ್ರಾರಂಭ

2514 (3375) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವಿಜಾಪುರ ಜಿಲ್ಲೆ ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಮೇಲ್ದಂಡೆ ಯೋಜನೆಯ ಹಿನ್ನೀರಿನಲ್ಲಿ ಮುಳುಗಡೆಯಾಗುವ ಪ್ರದೇಶಗಳ ಪುನರ್‌ವಸತಿ ಕೇಂದ್ರಗಳಿಗೆ ಸರ್ಕಾರ ಹೊಸದಾಗಿ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಶಿಕ್ಷಕರ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಮಂಜೂರಾತಿ ನೀಡಿದೆಯೇ?

ಆ) ಮಂಜೂರಾತಿ ನೀಡಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು.

ಪ್ರಾಥಮಿಕ ಶಾಲೆ - 1

ಪ್ರೌಢ ಶಾಲೆಗಳು - 2

ಆ) 2001-2003 ನೇ ಶೈಕ್ಷಣಿಕ ವರ್ಷದಿಂದ

ಬಿಜಾಪುರ ಜಿಲ್ಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಭರ್ತಿ

2515 (3376) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.